**SEPTEMBER 25, 2024**

**ALL INDIA RADIO- DHARWAD**
**PRADESH SAMACHARA (KANNADA) 7:05 AM**

ಮುಖ್ಯಾಂಶಗಳು

- ಮುಡಾ ನಿವೇಶನ ಹಂಚಿಕೆ ಪ್ರಕರಣ; ರಾಜ್ಯಪಾಲರ ತೀರ್ಮಾನ ಎತ್ತಿ ಹಿಡಿದ ಹೈಕೋರ್ಟ್ ಪೀಠ.
- 2030 ಕ್ಕೆ 60 ಸಾವಿರ ಮೆಗಾ ವ್ಯಾಟ್ ವಿದ್ಯುತ್ ಉತ್ಪಾದಿಸುವ ಗುರಿ – ಮುಖ್ಯಮಂತ್ರಿ ಸಿದ್ದರಾಮಯ್ಯ
- ನಿರುದ್ಯೋಗ ಸಮಸ್ಯೆ ನಿವಾರಣೆಗೆ ಅಗತ್ಯ ಕ್ರಮ – ಸಚಿವ ಡಾಕ್ಟರ್ ಎಂ.ಸಿ. ಸುಧಾಕರ್.
- ಕೌಶಲ ಅಭಿವೃದ್ಧಿ ಕೇಂದ್ರ ಸ್ಥಾಪನೆಗೆ ಕೇಂದ್ರಕ್ಕೆ ಸಚಿವ ಕೆ.ಎಚ್.ಮುನಿಯಪ್ಪ ಮನವಿ.

ಈಗ ವಾರ್ತೆಗಳ ವಿವರ

ಮುಡಾ ನಿವೇಶನ ಹಂಚಿಕೆಗೆ ಸಂಬಂಧಿಸಿದಂತೆ, ತನಿಖೆಗೆ ತಮ್ಮ ವಿರುದ್ಧ ರಾಜ್ಯಪಾಲರು ನೀಡಿರುವ ಅನುಮತಿ ಪ್ರಶ್ನಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಲ್ಲಿಸಿದ್ದ ರಿಟ್ ಅರ್ಜಿಯನ್ನು ಹೈಕೋರ್ಟ್ ನಿನ್ನೆ ವಜಾಗೊಳಿಸಿ ರಾಜ್ಯಪಾಲರ ತೀರ್ಮಾನವನ್ನು ಎತ್ತಿ ಹಿಡಿದಿದೆ. ವಾದ, ಪ್ರತಿವಾದವನ್ನು ಆಲಿಸಿದ್ದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಏಕ ಸದಸ್ಯ ಪೀಠವು, ಈ ಮಹತ್ವದ ತೀರ್ಪು ನೀಡಿದ್ದು, ಮುಡಾ ಪ್ರಕರಣದ ಕುರಿತು ತನಿಖೆ ಅಗತ್ಯವಿದೆ. ರಾಜ್ಯಪಾಲರು ನೀಡಿರುವ ಅನುಮತಿ ಸರಿಯಾಗಿದೆ. ರಾಜ್ಯಪಾಲರು ನೀಡಿರುವ ವಿಚಾರಣೆಗೆ ತಡೆ ನೀಡಲು ಸಾಧ್ಯವಿಲ್ಲ ಎಂದು ಪೀಠ ತಿಳಿಸಿದೆ.
ತನಿಖೆಗೆ ತಮ್ಮ ವಿರುದ್ಧ ರಾಜ್ಯಪಾಲರು ನೀಡಿರುವ ಅನುಮತಿ ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಯನ್ನು ರಾಜ್ಯ ಹೈಕೋರ್ಟ್ ತಿರಸ್ಕರಿಸಿರುವ ಹಿನ್ನೆಲೆ, ಮುಂದಿನ ಕಾನೂನು ಹೋರಾಟದ ಬಗ್ಗೆ ತಜ್ಞರೊಂದಿಗೆ ಚರ್ಚಿಸಿ ನಿರ್ಧರಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿದ್ದಾರೆ.

*******

2030 ಕ್ಕೆ 60 ಸಾವಿರ ಮೆಗಾ ವ್ಯಾಟ್ ವಿದ್ಯುತ್ ಉತ್ಪಾದಿಸುವ ಗುರಿ ಹೊಂದಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನ ಯಲಹಂಕದಲ್ಲಿರುವ ರಾಜ್ಯದ ಪ್ರಪ್ರಥಮ ನೈಸರ್ಗಿಕ ಅನಿಲ ಆಧಾರಿತ 370 ಮೆಗಾ ವ್ಯಾಟ್ ಸಾಮರ್ಥ್ಯದ ಸಂಯುಕ್ತ ಆವರ್ತ ವಿದ್ಯುತ್ ಸ್ಥಾವರವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಯಲಹಂಕ ವಿದ್ಯುತ್ ಸ್ಥಾವರದ ಆರಂಭಕ್ಕೆ ಶ್ರಮಿಸಿದ ಎಲ್ಲಾ ಕಾರ್ಮಿಕರಿಗೆ 5 ಸಾವಿರ ರೂಪಾಯಿ ಬೋನಸ್ ನೀಡಲಾಗುವುದು. ರಾಜ್ಯದ ಆರ್ಥಿಕ – ಸಾಮಾಜಿಕ ಪ್ರಗತಿಗೆ, ವಿದ್ಯುತ್ ಉತ್ಪಾದನೆಯಲ್ಲಿ ರಾಜ್ಯ ಸ್ವಾವಲಂಬಿಯಾಗಬೇಕು. ಕೃಷಿ ಮತ್ತು ಕೈಗಾರಿಕೆ ಹಾಗೂ ವಸತಿಗೆ ಅಪಾರ ಪ್ರಮಾಣದ ವಿದ್ಯುತ್ ಅಗತ್ಯ. ಕೃಷಿ, ಕೈಗಾರಿಕೆಗಳ ಅಭಿವೃದ್ಧಿಯಿಂದ ಉದ್ಯೋಗ ಸೃಷ್ಟಿಯಾಗುತ್ತದೆ. ಉದ್ಯೋಗದಿಂದ ಜಿಡಿಪಿ ಪ್ರಗತಿಯಾಗುತ್ತದೆ ಎಂದರು. 1,500 ಕೋಟಿ ಮೌಲ್ಯದ ವಿದ್ಯುತ್‌ನ್ನು ಹೊರ ರಾಜ್ಯಕ್ಕೆ ಮಾರಾಟ ಮಾಡಲಾಗಿದೆ. ಕಳೆದ ವರ್ಷ ಬರಗಾಲದಲ್ಲೂ ಸಹ ಅಗತ್ಯ ವಿದ್ಯುತ್ ಪೂರೈಸಲಾಗಿದೆ. ವರ್ಷದಿಂದ ವರ್ಷಕ್ಕೆ ವಿದ್ಯುತ್ ಬಳಕೆ, ಬೇಡಿಕೆ ಹೆಚ್ಚಾಗುತ್ತಿದೆ ಎಂದು ತಿಳಿಸಿದರು.

*******

ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ ಅಧಿನಿಯಮ – 2024 ಕ್ಕೆ ಗೆಜೆಟ್ ಅಧಿಸೂಚನೆಯನ್ನು ಹೊರಡಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.ಸಾಮಾಜಿಕ ಜಾಲತಾಣದ ಮೂಲಕ ಈ ಕುರಿತು

ಮಾಹಿತಿ ನೀಡಿರುವ ಅವರು, ಇದರನ್ವಯ ರಾಜ್ಯದಲ್ಲಿ ಕ್ಷೇಮಾಭಿವೃದ್ಧಿ ಮಂಡಳಿಯನ್ನು ರಚಿಸುವ ಮೂಲಕ ಸಿನಿ ಹಾಗೂ ಸಾಂಸ್ಕೃತಿಕ ಕಾರ್ಯಕರ್ತರಿಗೆ ಸಾಮಾಜಿಕ ಭದ್ರತೆಯನ್ನು ಒದಗಿಸುವ ಹಾಗೂ ಅವರ ಕ್ಷೇಮಾಭಿವೃದ್ಧಿಗೆ ವಿಶೇಷ ಪ್ರಾಧಾನ್ಯತೆ ನೀಡಲು ಅವಕಾಶವಾಗಲಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

*******

ರಾಜ್ಯದಲ್ಲಿ ಪದವಿ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ನಿರುದ್ಯೋಗ ಸಮಸ್ಯೆ ನಿವಾರಣೆಗೆ ಸರ್ಕಾರ ಪ್ರಯತ್ನಿಸುತ್ತಿದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳಲ್ಲಿ ವಿವಿಧ ಕೌಶಲ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಉನ್ನತ ಶಿಕ್ಷಣ ಖಾತೆ ಸಚಿವ ಡಾಕ್ಟರ್ ಎಂ.ಸಿ.ಸುಧಾಕರ್ ಹೇಳಿದ್ದಾರೆ. ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಆವರಣದಲ್ಲಿರುವ ಗಾಂಧಿಭವನದಲ್ಲಿ ಆಯೋಜಿಸಲಾದ 74ನೇ ವಾರ್ಷಿಕ ಘಟಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದ ಅವರು, ಎಲ್ಲ ವಿಶ್ವವಿದ್ಯಾಲಯಗಳಲ್ಲಿ ಏಕರೂಪದ ವೇಳಾಪಟ್ಟಿ ತರಲಾಗುತ್ತಿದೆ. ನಿರ್ದಿಷ್ಟ ಸಮಯಕ್ಕೆ ಪರೀಕ್ಷೆ ಹಾಗೂ ಫಲಿತಾಂಶ ಪ್ರಕಟಿಸಲಾಗುವುದು. ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಡಿಜಿಟಲ್ ಲೈಬ್ರರಿ ಆರಂಭಿಸುವಂತೆ ತಿಳಿಸಿದರು. ಘಟಿಕೋತ್ಸವದಲ್ಲಿ ಬಾಗಲಕೋಟೆ ಜಿಲ್ಲೆ, ಜಮಖಂಡಿ ತಾಲೂಕಿನ, ಮರೇಗುದ್ದಿಯ ನಿರುಪಾಧೀಶ ಸ್ವಾಮೀಜಿ, ಶಿಕ್ಷಣ ತಜ್ಞ ಎಸ್.ಎನ್.ವೆಂಕಟಲಕ್ಷ್ಮೀ ನರಸಿಂಹರಾಜು ಹಾಗೂ ಹುಬ್ಬಳ್ಳಿಯ ಸ್ವರ್ಣಗ್ರೂಪ್ ಕಂಪನಿ ಮುಖ್ಯಸ್ಥ ವೆಂಕಟ ಸತ್ಯ ವರಪ್ರಸಾದ ಅವರಿಗೆ, ಗೌರವ ಡಾಕ್ಟರೇಟ್ ನೀಡಲಾಯಿತು. ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಕನ್ನಡ ಸ್ನಾತಕೋತ್ತರ ವಿಭಾಗದಲ್ಲಿ ಸಂಗೀತ ಲಕ್ಕಪ್ಪನವರ ಹಾಗೂ ಸಮೂಹ ಸಂವಹನ ಹಾಗೂ ಪತ್ರಿಕೋದ್ಯಮ ಸ್ನಾತಕೋತ್ತರ ವಿಭಾಗದಲ್ಲಿ ಜಯಶ್ರೀ ತಳವಾರ ತಲಾ 9 ಚಿನ್ನದ ಪದಕಗಳನ್ನು ಪಡೆದುಕೊಂಡರು. ಬಡ ಕುಟುಂಬದಿಂದ ಬಂದು ಉನ್ನತ ಸಾಧನೆಗೈದ ಬಾಗಲಕೋಟೆ ಜಿಲ್ಲೆ ಇಳಕಲ ತಾಲೂಕಿನ ವಿದ್ಯಾರ್ಥಿನಿ ಜಯಶ್ರೀ ತಳವಾರ ಆಕಾಶವಾಣಿಯೊಂದಿಗೆ ತಮ್ಮ ಸಂತಸ ವ್ಯಕ್ತಪಡಿಸಿದ್ದಾರೆ.

ಧ್ವನಿ : ಜಯಶ್ರೀ ತಳವಾರ (21 ಸೆಕೆಂದುಗಳು)

ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಸ್ನಾತಕೋತ್ತರ ವಿಭಾಗದಲ್ಲಿ ಉತ್ತಮ ಅಂಕಗಳನ್ನು ಗಳಿಸಿ ಒಟ್ಟು 8 ಚಿನ್ನದ ಪದಕಗಳಿಗೆ ಭಾಜನರಾದ ರಚನಾ ದಿನೇಶ ಶಿವಳ್ಳಿ ಪ್ರದೇಶ ಸಮಾಚಾರದೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

ಧ್ವನಿ : ರಚನಾ ದಿನೇಶ್ ಶಿವಳ್ಳಿ ( 10 ಸೆಕೆಂದುಗಳು)

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎಚ್.ಮುನಿಯಪ್ಪ, ನವದೆಹಲಿಯಲ್ಲಿ ಕೇಂದ್ರದ ಸೂಕ್ಷ್ಮ ಮತ್ತು ಸಣ್ಣ, ಮಧ್ಯಮ ಕೈಗಾರಿಕೆ ಹಾಗೂ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವರಾದ ಶೋಭಾ ಕರಂದ್ಲಾಜೆ ಅವರನ್ನು ಭೇಟಿ ಮಾಡಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕೌಶಲ್ಯ ತರಬೇತಿ ನೀಡಲು ಅನುಕೂಲವಾಗುವಂತೆ ಕೌಶಲ ಅಭಿವೃದ್ಧಿ ಕೇಂದ್ರ ಸ್ಥಾಪನೆಗೆ ಮನವಿ ಸಲ್ಲಿಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯು ನುರಿತ ಮತ್ತು ಕೌಶಲ ರಹಿತ ಯುವಕರನ್ನು ಹೊಂದಿದ್ದು, ಬೇಡಿಕೆ ಆಧಾರಿತ ಕೌಶಲ ತರಬೇತಿಗಳನ್ನು ನೀಡುವ ಮೂಲಕ ಕೌಶಲ ತರಬೇತಿ ಹೆಚ್ಚಿಸಲು ಸಹಕರಿಸುವಂತೆ ಹಾಗೂ ಉದ್ಯಮದ ಬೇಡಿಕೆ ಆಧಾರಿತ ಬಹು ಕೌಶಲ್ಯ ಅಭಿವೃದ್ಧಿ ಕೇಂದ್ರ ಮಂಜೂರು ಮಾಡಲು ಕೋರಿದರು.

*******

ಹೊರಗುತ್ತಿಗೆ ನೌಕರರಿಗೆ ಸರಿಯಾದ ವೇತನ, ವಿನಾಕಾರಣ ಕಿರುಕುಳ ನೀಡುವುದು ಕಂಡುಬಂದಲ್ಲಿ ಅಧಿಕಾರಿಗಳನ್ನೇ ನೇರವಾಗಿ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಅಬಕಾರಿ ಖಾತೆ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದ್ದಾರೆ.ಬಾಗಲಕೋಟೆಯಲ್ಲಿ ನಿನ್ನೆ ಸರ್ಕಾರದ ವಿವಿಧ ಇಲಾಖೆಗಳು ಹಾಗೂ ನಿಗಮ ಮಂಡಳಿಗಳಲ್ಲಿ ಕಾರ್ಯ

ನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರಿಗೆ ದೊರಕುವ ಶಾಸನಾತ್ಮಕ ಸೌಲಭ್ಯಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲೆಯ ಎಲ್ಲ ಹೊರಗುತ್ತಿಗೆ ಸಂಸ್ಥೆಗಳು ನೀಡುತ್ತಿರುವ ಹೊರಗುತ್ತಿಗೆ ನೌಕರರ ಮಾಹಿತಿ ಪಡೆದು ಸಮಗ್ರವಾದ ವರದಿಯನ್ನು ಒಂದು ತಿಂಗಳಲ್ಲಿ ಸಲ್ಲಿಸುವಂತೆ ಸೂಚಿಸಿದರು.

*******

ಮೈಸೂರು ದಸರಾ ಉತ್ಸವದ ಜಂಬೂಸವಾರಿ ಮೆರವಣಿಗೆಯಲ್ಲಿ ಭಾಗವಹಿಸಲು ಬಂದಿರುವ ಸಾಕು ಆನೆಗಳ ಬಳಿ ಫೋಟೋ, ಸೆಲ್ಫಿ, ರೀಲ್ಸ್‌ಗಳಿಗೆ ಅವಕಾಶ ನೀಡಬಾರದು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಶಿಬಿರದಿಂದ ಕರೆತಂದ ಆನೆಗಳನ್ನು ಸುರಕ್ಷಿತವಾಗಿ ವಾಪಸ್ ಕಳುಹಿಸುವವರೆಗೂ ಯಾವುದೇ ಅವಘಡಗಳಿಗೆ ಅವಕಾಶ ಆಗದಂತೆ ಎಚ್ಚರವಹಿಸಬೇಕು. ಇಲ್ಲದಿದ್ದರೆ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಅರಣ್ಯ ಖಾತೆ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಅರಮನೆಯ ಆವರಣದಲ್ಲಿ ಬೀಡುಬಿಟ್ಟಿರುವ ಆನೆಗಳ ಬಳಿ ಕೆಲವರು ದಂತ, ಸೊಂಡಿಲು ಹಿಡಿದು ಫೋಟೊ ತೆಗೆಸಿಕೊಂಡು, ರೀಲ್ಸ್ ಮಾಡಿದ್ದಾರೆ. ಜನರ ಇಂತಹ ನಡವಳಿಕೆಗಳಿಂದ ಆನೆಗಳು ವಿಚಲಿತವಾಗಿ ಅನುಚಿತವಾಗಿ ವರ್ತಿಸುತ್ತಿವೆ. ಹಾಗಾಗಿ ಈ ನಿರ್ಧಾರವನ್ನು ಕೈಗೊಳ್ಳಲಾಗಿದೆ ಎಂದಿದ್ದಾರೆ.

*******

ಧಾರವಾಡ ಕೃಷಿ ಮೇಳದಲ್ಲಿ ಕೃಷಿ ಸಾಹಿತ್ಯ ಮಳಿಗೆಯ ಮೂಲಕ ಕೃಷಿ ಸಂಬಂಧಿತ ಪ್ರಕಟಣೆಗಳು, ಪುಸ್ತಕಗಳು ಹಾಗೂ ಪೂರಕ ಮಾಹಿತಿಗಳನ್ನೊಳಗೊಂಡ ಕೃತಿಗಳು ಹಾಗೂ ಪತ್ರಿಕೆಗಳಿಗೆ ಉತ್ತಮ ಸ್ಪಂದನೆ ವ್ಯಕ್ತವಾಗಿದೆ. ಈ ಸಂದರ್ಭದಲ್ಲಿ, ಕೃಷಿ ಮಳಿಗೆಗೆ ದೊರೆತ ಪ್ರತಿಕ್ರಿಯೆ ಹಾಗೂ ಕೃಷಿ ಸಂಬಂದಿತ ಸಾಹಿತ್ಯದ ಮಹತ್ವ ಕುರಿತು ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ ಧಾರವಾಡದ ಕೃಷಿ ಕಾಮಧೇನು ಪತ್ರಿಕೆ ಸಂಪಾದಕರದ ಡಾಕ್ಟರ್ ವಿರೂಪಾಕ್ಷ ಬಡಿಗೇರ
ಧ್ವನಿ : ವಿರೂಪಾಕ್ಷ ಬಡಿಗೇರ ( 60 ಸೆಕೆಂದುಗಳು)

ಕೃಷಿ ಮೇಳದ ಕೊನೆಯ ದಿನವಾದ ನಿನ್ನೆ 4 ಲಕ್ಷ 70 ಸಾವಿರ ರೈತರು ಸೇರಿದಂತೆ ಕೃಷಿ ಮೇಳದ ನಾಲ್ಕೂ ದಿನಗಳಲ್ಲಿ ಒಟ್ಟು 21 ಲಕ್ಷ 28 ಸಾವಿರ ಜನರು ಭಾಗವಹಿಸಿದ್ದರು ಎಂದು ವಿಶ್ವವಿದ್ಯಾಲಯದ ಪ್ರಕಟಣೆ ತಿಳಿಸಿದೆ.

*******

ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ, ಕಲ್ಯಾಣ ಸಮಿತಿ ಅಧ್ಯಕ್ಷ ಪಿ.ಎಂ. ನರೇಂದ್ರಸ್ವಾಮಿ ನೇತೃತ್ವದ, 19 ಜನ ಸದಸ್ಯರನ್ನು ಒಳಗೊಂಡ ಸಮಿತಿ, ಇಂದಿನಿಂದ 27ರ ವರೆಗೆ, ಕಲಬುರಗಿ ವಿಭಾಗದ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಿದೆ ಎಂದು, ವಿಧಾನಸಭೆ ಸಚಿವಾಲಯದ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ತಿಳಿಸಿದ್ದಾರೆ. ಕಲಬುರಗಿ, ಯಾದಗಿರಿ, ಬೀದರ, ರಾಯಚೂರು, ಕೊಪ್ಪಳ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳಲ್ಲಿ ಪರಿಶಿ ್ಟ ಸಮುದಾಯದವರ ಅಭಿವೃದ್ಧಿ, ಕಲ್ಯಾಣ, ಏಳಿಗೆಗೆ ಕೈಗೊಳ್ಳಲಾದ ಕಾರ್ಯಕ್ರಮಗಳು ಹಾಗೂ ಯೋಜನೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಸಲಿದೆ.

*******

ಮಂಗಳೂರು ವಿಶ್ವವಿದ್ಯಾಲಯದ 45ನೇ ಸಂಸ್ಥಾಪನಾ ದಿನ, ಇಂದು ಬೆಳಗ್ಗೆ 11 ಗಂಟೆಗೆ, ಮಂಗಳ ಗಂಗೋತ್ರಿಯ, ಮಂಗಳ ಸಭಾಂಗಣದಲ್ಲಿ, ಆಯೋಜಿಸಲಾಗಿದೆ ಎಂದು ವಿಶ್ವವಿದ್ಯಾಲಯದ ಉಪ ಕುಲಪತಿ ಪ್ರೊಫೆಸರ್ ಪಿ.ಎಲ್. ಧರ್ಮ ತಿಳಿಸಿದ್ದಾರೆ.

*******